# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 587 |
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 08.12.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿರುವ ಬಿಲ್ ಕಲೆಕ್ಟರ್‌ಗಳು ಸಮಯಕ್ಕೆ ಸರಿಯಾಗಿ ಗ್ರಾಮ ಪಂಚಾಯತ್‌ಗಳಿಗೆ ಬರದೆ ಇರುವುದರಿಂದ ದಿನ ನಿತ್ಯ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| (ಆ) | ಬಂದಿದ್ದಲ್ಲಿ, ಬಿಲ್ ಕಲೆಕ್ಟರ್‌ಗಳು ಗ್ರಾಮ ಪಂಚಾಯತ್‌ಗಳಲ್ಲಿ ಕಡ್ಡಾಯವಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಆದಾಗ್ಯೂ, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಎಲ್ಲಾ ವರ್ಗದ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯ ಮಾಡಲಾಗಿದೆ.<br><br>ರಾಜ್ಯದ ಗ್ರಾಮ ಪಂಚಾಯತಿ ಕಛೇರಿಗಳಲ್ಲಿ ಅಧಿಕಾರಿ / ಸಿಬ್ಬಂದಿ ವರ್ಗದವರಿಗಾಗಿ ಚಲನವಲನ ಪುಸ್ತಕವನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು. ಅನ್ಯ ಕಾರ್ಯನಿಮಿತ್ತ ಅಧಿಕಾರಿ / ಸಿಬ್ಬಂದಿ ವರ್ಗದವರು ಕಛೇರಿಯಿಂದ ಹೊರಗುಳಿದಿದ್ದರೆ ಸಮಯವನ್ನು ನಮೂದಿಸಿ, ಕಡ್ಡಾಯವಾಗಿ ದಾಖಲಿಸುವಂತೆ ಈಗಾಗಲೇ ತಿಳಿಸಲಾಗಿದೆ. |

ಸಂಖ್ಯೆ: ಗ್ರಾಅಪ 601 ಗ್ರಾಪಂಅ 2023.

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.